ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ದಿನಾಂಕ: 26-11-2020 ರಂದು ನಡೆದ ವಾರ್ಡ್ ಸಂಖ್ಯೆ: 115 ವನ್ನಾರಪೇಟೆ ವಾರ್ಡಿನ ವಾರ್ಡ್ ಸಮಿತಿ ಸಭೆಯ ನಡಾವಳಿಗಳು**

ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶದ ಸಂಖ್ಯೆ: ಐ12(5)ಪಿಆರ್/35/2020-21, ದಿನಾಂಕ: 21-09-2020 ರ ಆದೇಶದಂತೆ ದಿನಾಂಕ: 26-11-2020 ರಂದು ವಾರ್ಡ್ ಸಂಖ್ಯೆ: 115 ವನ್ನಾರಪೇಟೆ ವಾರ್ಡ್‌ನಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು.

**ಸಭೆಗೆ ಹಾಜರಿದ್ದವರ ವಿವರಗಳು**

| ಸನ್ಮಾನ್ಯ ಶ್ರೀ. ಎನ್. ಎ. ಹ್ಯಾರೀಸ್ | | ಮಾನ್ಯ ಶಾಸಕರು. ಶಾಂತಿನಗರ ವಿಧಾನ ಸಭಾ ಕ್ಷೇತ್ರ |
|---|---|---|
| ಕ್ರ.ಸಂ | ಅಧಿಕಾರಿಗಳ ಹೆಸರು | ಪದನಾಮ |
| 1 | ಶ್ರೀ. ಡಿ. ಮೂರ್ತಿ | ಸದಸ್ಯ ಕಾರ್ಯದರ್ಶಿ ಮತ್ತು ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ: 115 |
| 2 | ಶ್ರೀ. ಅಪ್ಪುರಾಜ್ | ಸಹಾಯಕ ಕಾರ್ಯಪಾಲಕ ಅಭಿಯಂತರರ, ಘನತ್ಯಾಜ್ಯ ನಿರ್ವಹಣೆ ಶಾಂತಿನಗರ ವಿಭಾಗ |
| 3 | ಶ್ರೀ ಚಂದ್ರಪ್ಪ ಕೆ ಬಿ | ಸಹಾಯಕ ಕಂದಾಯ ಅಧಿಕಾರಿಗಳು, ದೊಮ್ಮಲೂರು ಉಪ ವಿಭಾಗ ಮತ್ತು ಸಮಿತಿ ಸದಸ್ಯರು |
| 4 | ಶ್ರೀ ಟಿ.ಎಸ್. ನಾಗಪ್ಪ | ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ |
| 5 | ಶ್ರೀ ಕೆ ಎಸ್ ಚಿದಾನಂದ | ಹಿರಿಯ ಆರೋಗ್ಯ ಪರಿವೀಕ್ಷಕರು & ಸಮಿತಿ ಸದಸ್ಯರು ವಾರ್ಡ್ ಸಂಖ್ಯೆ: 115 |
| 6 | ಶ್ರೀಮತಿ. ಶೈಲಜ ಬಿ | ಸಹಾಯಕ ಕಂದಾಯ ಅಧಿಕಾರಿಗಳು (ಕಲ್ಯಾಣ) |
| 7 | ಶ್ರೀ. ಎಲ್. ಸಗಾಯನಾಥನ್ | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ಸಂಖ್ಯೆ: 115 |
| 8 | ಡಾ|| ಚಿತ್ರ | ಆರೋಗ್ಯಾಧಿಕಾರಿಗಳು |
| 9 | ದೇವರಾಜ್ | ಅರಣ್ಯ ಇಲಾಖೆ, ಬಿಬಿಎಂಪಿ |
| 10 | ಶ್ರೀ. ಶ್ರೀನಿವಾಸ್ | ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯು.ಎಸ್.ಎಸ್.ಬಿ |
| 11 | ಅಜಯ್ ಎನ್ | ಸಹಾಯಕ ಅಭಿಯಂತರರು, ಬೆಸ್ಕಾಂ |
| 12 | ಕೆ ಶ್ರೀನಿವಾಸ್ | ಸಹಾಯಕ ಅಭಿಯಂತರರು, ಬೆಸ್ಕಾಂ |
| 13 | ಟಿ.ಡಿ. ಮಂಜುನಾಥ | ಸಹಾಯಕ ಕಾರ್ಯಪಾಲಕ ಅಭಿಯಂತರರು, ದೊಮ್ಮಲೂರು ಉಪ ವಿಭಾಗ, ಬಿಬಿಎಂಪಿ |
| 14 | ಆರ್ ಮಧು | ಕಾರ್ಯಪಾಲಕ ಅಭಿಯಂತರರು, ಶಾಂತಿನಗರ ವಿಭಾಗ, ಬಿಬಿಎಂಪಿ |
| ವಾರ್ಡ್ ಸಮಿತಿ ಸಭೆಯಲ್ಲಿ ಹಾಜರಿದ್ದ ಸದಸ್ಯರುಗಳ ವಿವರ | | |
| 15 | ಶ್ರೀಮತಿ . ಮಹಾಲಕ್ಷ್ಮಿ | ವಾರ್ಡ್ ಸಮಿತಿ ಸದಸ್ಯರು |
| 16 | ಶ್ರೀಮತಿ. ಶಿವಗಾಮಿ | ವಾರ್ಡ್ ಸಮಿತಿ ಸದಸ್ಯರು |
| 17 | ಥಾಮ | ವಾರ್ಡ್ ಸಮಿತಿ ಸದಸ್ಯರು |
| 18 | ಜಯ್ ಕುಮಾರ್ | ವಾರ್ಡ್ ಸಮಿತಿ ಸದಸ್ಯರು |
| 19 | ವಿನೋದ್ | ವಾರ್ಡ್ ಸಮಿತಿ ಸದಸ್ಯರು |

| | | |
|---|---|---|
| 20 | ಮುಸ್ತಫಾ | ವಾರ್ಡ್ ಸಮಿತಿ ಸದಸ್ಯರು |
| 21 | ಪ್ರಭಾಕರ್ | ವಾರ್ಡ್ ಸಮಿತಿ ಸದಸ್ಯರು |
| 22 | ಸುಬ್ರಮಣಿ | ವಾರ್ಡ್ ಸಮಿತಿ ಸದಸ್ಯರು<br>(ಮಹಾವೀರ ಮಾರ್ಕೆಟ್ ಅಸೋಸಿಯೇಷನ್) |
| 23 | ರಾಜಾ ಶೆಟ್ಟಿ | ವಾರ್ಡ್ ಸಮಿತಿ ಸದಸ್ಯರು<br>(ಪಿ.ಟಿ.ಎ. ಅಸೋಸಿಯೇಷನ್) |

ದಿನಾಂಕ: 26-11-2020 ರಂದು ಮಧ್ಯಾಹ್ನ 2-00 ಗಂಟೆಗೆ ವಾರ್ಡ್ ಸಂಖ್ಯೆ 115 ವನ್ನಾರಪೇಟೆ ವಾರ್ಡ್ ವ್ಯಾಪ್ತಿಯ ಸಾರ್ವಜನಿಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸುವ ಸಂಬಂಧ ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಂಖ್ಯೆ 115 ವನ್ನಾರಪೇಟೆ ವ್ಯಾಪ್ತಿಯ ನೀಲಸಂದ್ರ ಬಜಾರ್ ಸ್ಟ್ರೀಟ್‌ನ ಎಸ್.ಆರ್.ಕೆ. ಸಮುದಾಯ ಭವನದಲ್ಲಿ ನಡೆಸಲಾಯಿತು.

ಸಭೆಯ ಆರಂಭದಲ್ಲಿ ಸಮಿತಿಯ ಸದಸ್ಯ ಕಾರ್ಯದರ್ಶಿಯವರು ಹಾಗೂ ಸಭೆಗೆ ಆಗಮಿಸಿದ ಸನ್ಮಾನ್ಯ ಶ್ರೀ. ಎನ್. ಎ. ಹ್ಯಾರಿಸ್, ಮಾನ್ಯ ಶಾಸಕರು ಶಾಂತಿನಗರ ವಿಧಾನ ಸಭಾ ಕ್ಷೇತ್ರ ರವರನ್ನು ವಾರ್ಡ್ ಸಮಿತಿ ಸದಸ್ಯರನ್ನು ವಿವಿಧ ಇಲಾಖೆಯಿಂದ ಆಗಮಿಸಿದ್ದ ಅಧಿಕಾರಿಗಳನ್ನು ಮತ್ತು ಸಾರ್ವಜನಿಕರುಗಳಿಗೆ ಸಭೆಗೆ ಸ್ವಾಗತವನ್ನು ಕೋರಿದರು.

ಸಭೆಯ ಪ್ರಾರಂಭದಲ್ಲಿ ಹಿಂದಿನ ಸಭೆಯ ನಡಾವಳಿಗಳನ್ನು ಓದಲಾಯಿತು. ಮತ್ತು ಸಾರ್ವಜನಿಕರ ಸಮಸ್ಯೆಗಳನ್ನು ಆದಷ್ಟು ಬಗೆಹರಿಸಿರುವ ಬಗ್ಗೆ ತಿಳಿಸಲಾಯಿತು. ಮತ್ತು ಕೆಲವೊಂದು ಸಮಸ್ಯೆಗಳ ಪರಿಹಾರ ಕಾರ್ಯವು ಪ್ರಗತಿಯಲ್ಲಿರುವುದನ್ನು ಸಾರ್ವಜನಿಕರ ಗಮನಕ್ಕೆ ತರಲಾಯಿತು.

ಇಂದು ನಡೆದ ಸಭೆಯಲ್ಲಿ ಪ್ರಮುಖವಾಗಿ ಕೆಳಕಂಡ ವಿಷಯಗಳನ್ನು ಚರ್ಚಿಸಲಾಯಿತು.

1. ವಾರ್ಡಿನಲ್ಲಿ ಬೀದಿ ದೀಪಗಳ ನಿರ್ವಹಣೆ ಬಗ್ಗೆ.
2. ಕುಡಿಯುವ ನೀರಿನ ಸಮಸ್ಯೆ ಕುರಿತು.
3. ಬೆಸ್ಕಾಂ ಇಲಾಖೆಗೆ ಸಂಬಂಧಿಸಿದ ಕೆಲಸ ಕಾರ್ಯಗಳ ಕುರಿತು.
4. ರಸ್ತೆ ಗುಂಡಿಗಳನ್ನು ಮುಚ್ಚುವ ಬಗ್ಗೆ.
5. ಪಾಲಿಕೆಯ ಅರಣ್ಯ ಇಲಾಖೆಯಿಂದ ಮರಗಳ ಟ್ರಿಮ್ಮಿಂಗ್ ಮಾಡುವ ಬಗ್ಗೆ.
6. ಬೃಹತ್ ನೀರುಗಾಲುವೆ ಇಲಾಖೆಯಿಂದ ತಡೆಗೋಡೆ ನಿರ್ಮಾಣ ಮಾಡುವ ಬಗ್ಗೆ ಮತ್ತು ಚಾನಲ್ ರಸ್ತೆಯಲ್ಲಿ ಹಾಕಿರುವ ಹೂಳನ್ನು ತೆರವು ಮಾಡುವ ಬಗ್ಗೆ.
7. ರಸ್ತೆ ಮತ್ತು ಮೂಲಭೂತ ಸೌಕರ್ಯ ಇಲಾಖೆಯಿಂದ **(Major roads)** ವಾರ್ಡಿನಲ್ಲಿ ಕೈಗೊಂಡಿರುವ ಕಾಮಗಾರಿಗಳ ಕುರಿತು.
8. ವಿವೇಕನಗರ ಫರ್ದರ್ ಬಡಾವಣೆಯ ೮ನೇ ಅಡ್ಡರಸ್ತೆಯ ಕಾಂಕ್ರಿಟ್ ಕಾಮಗಾರಿ ಕುರಿತು.

## <u>ವಾರ್ಡ್ ಸಮಿತಿ ಸಭೆಯ ನಡಾವಳಿಗಳು</u>

| ಕ್ರ.ಸಂ | ಚರ್ಚಿಸಿದ ವಿಷಯಗಳು | ತೆಗೆದುಕೊಂಡ ಕ್ರಮಗಳು |
|---|---|---|
| 1 | ವಾರ್ಡ್ ಸಮಿತಿ ಸದಸ್ಯರಾದ ಶ್ರೀಮತಿ. ಶಿವಗಾಮಿ ರವರು ವಾರ್ಡ್‌ನಲ್ಲಿ ಬೀದಿ ದೀಪಗಳ ನಿರ್ವಹಣೆಯನ್ನು ಸಮರ್ಪಕವಾಗಿ ನಿರ್ವಹಿಸದೇ ಇರುವ ಬಗ್ಗೆ ಮತ್ತು ವಿವೇಕನಗರ ಫರ್ದರ್ ಬಡಾವಣೆಯ ೮ನೇ ಅಡ್ಡರಸ್ತೆಯಲ್ಲಿ ಯಾವುದೇ ಒಂದು ಬೀದಿ ದೀಪ ಇರುವುದಿಲ್ಲವೆಂದು ಸಭೆಯಲ್ಲಿ ತಿಳಿಸಿದರು. | ಪಾಲಿಕೆಯ ವಿದ್ಯುತ್ ವಿಭಾಗದ ಸಹಾಯಕ ಅಭಿಯಂತರರಾದ ಶ್ರೀ. ಮಂಜಪ್ಪ ರವರು ಮಾತನಾಡಿ ಕೂಡಲೆ ವಾರ್ಡಿನಲ್ಲಿರುವ ಬೀದಿ ದೀಪಗಳ ಸಮಸ್ಯೆಯನ್ನು ಸರಿಪಡಿಸುವುದಾಗಿ ಸಭೆಗೆ ತಿಳಿಸಿದರು. |

| | | |
|---|---|---|
| 2 | ವಾರ್ಡಿನಲ್ಲಿ ಹಲವಾರು ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದು, ಸೊಣ್ಣೇನಹಳ್ಳಿ ಪ್ರದೇಶಗಳಲ್ಲಿ ಕಲುಷಿತ ನೀರು ಸರಬರಾಜು ಆಗುತ್ತಿರುತ್ತದೆ, ಇದರಿಂದ ವಾರ್ಡಿನ ನಿವಾಸಿಗಳು ಅನಾರೋಗ್ಯಕ್ಕೆ ತುತ್ತಾಗುತ್ತಿರುವುದಾಗಿ ವಾರ್ಡ್ ಸಮಿತಿ ಸದಸ್ಯರು ಸಭೆಯಲ್ಲಿ ತಿಳಿಸಿ, ಕೂಡಲೇ ಸಮಸ್ಯೆಯನ್ನು ಬಗೆಹರಿಸುವಂತೆ ವಾರ್ಡ್ ಸಮಿತಿ ಸದಸ್ಯರಾದ ಸುಬ್ರಮಣಿ ರವರು ಕೋರಿದರು. | ಈ ಬಗ್ಗೆ ಮಾನ್ಯ ಶಾಸಕರು, ಬಿ.ಡಬ್ಲ್ಯು.ಎಸ್.ಎಸ್.ಬಿ. ಇಲಾಖೆಯ ಅಧಿಕಾರಿಗಳಿಗೆ ಕೂಡಲೇ ಸಮಸ್ಯೆಯನ್ನು ಪರಿಹರಿಸುವಂತೆ ಸೂಚಿಸಿದರು. ಹಾಗೂ ಕಲುಷಿತ ನೀರು ಸರಬರಾಜು ಆಗದಂತೆ ಕ್ರಮಕೈಗೊಳ್ಳಲು ಆದೇಶಿಸಿದರು.<br>ಸಮಸ್ಯೆಯನ್ನು ಕೂಡಲೇ ಪರಿಹರಿಸುವುದಾಗಿ ಅಧಿಕಾರಿಗಳು ತಿಳಿಸಿದರು. |
| 3 | ವಾರ್ಡಿನಲ್ಲಿ ಎರಡು ಮೂರು ಗಂಟೆ ವಿದ್ಯುತ್ ಸರಬರಾಜನ್ನು ನಿಲ್ಲಿಸಲಾಗುತ್ತಿದೆ ಮತ್ತು ವಾರ್ಡಿನಲ್ಲಿರುವ ಹಳೆಯ ಮತ್ತು ಶಿಥಿಲಗೊಂಡಿರುವ ವಿದ್ಯುತ್ ಕಂಬಗಳನ್ನು ತೆರವುಗೊಳಿಸುವಂತೆ ಕೋರಿರುತ್ತಾರೆ. | ಈ ಬಗ್ಗೆ ಮಾತನಾಡಿದ ಶ್ರೀ. ನಾಗಪ್ಪ ಬೆಸ್ಕಾಂ ಇಂಜಿನಿಯರ್ ರವರು ವಿದ್ಯುತ್ ಸಮಸ್ಯೆಯನ್ನು ಕೂಡಲೇ ಬಗೆಹರಿಸುವುದಾಗಿ ತಿಳಿಸಿದರು. ಮತ್ತು ಶಿಥಿಲಗೊಂಡಿರುವ ಅಥವಾ ಬಾಗಿರುವ ವಿದ್ಯುತ್ ಕಂಬಗಳನ್ನು ಹೊಸ ವಿದ್ಯುತ್ ಕಂಬಗಳಿಂದ ಬದಲಾಯಿಸಲು ಕ್ರಮಕೈಗೊಳ್ಳಲಾಗುವುದು ಎಂದ ಸಭೆಗೆ ತಿಳಿಸಿದರು. |
| 4 | ವಾರ್ಡ್ ಸಮಿತಿ ಸದಸ್ಯರಾದ ಮುಸ್ತಫಾ ರವರು ಮಾತನಾಡಿ ವಾರ್ಡಿನ ಎಲ್ಲಾ ರಸ್ತೆಗಳಲ್ಲಿಯೂ ರಸ್ತೆಗುಂಡಿಗಳ ಹೆಚ್ಚಾಗಿದ್ದು, ಇದರಿಂದ ಸಾರ್ವಜನಿಕರಿಗೆ ಬಹಳ ತೊಂದರೆಯಾಗುತ್ತಿದ್ದು, ಕೂಡಲೆ ರಸ್ತೆಗುಂಡಿಗಳನ್ನು ಮುಚ್ಚಲು ಕೋರಿದರು. | ಈಗಾಗಲೇ ವಾರ್ಡಿನ ಕೆ.ಐ.ಎ.ಆರ್. ರಸ್ತೆ ಮತ್ತು ಹಲವು ರಸ್ತೆಗಳಲ್ಲಿ ರಸ್ತೆಗುಂಡಿಗಳನ್ನು ಮುಚ್ಚಲಾಗುತ್ತಿದೆ. ಹಾಗೂ ಪ್ರಸ್ತುತ ಮಳೆ ಸುರಿಯುತ್ತಿರುವುದರಿಂದ ಕಾಮಗಾರಿ ನಿರ್ವಹಿಸಲು ಸಾಧ್ಯವಾಗುತ್ತಿರುವುದಿಲ್ಲವಾದ್ದರಿಂದ ಮಳೆ ನಿಂತ ಕೂಡಲೇ ಉಳಿದ ರಸ್ತೆಗಳಲ್ಲಿರುವ ರಸ್ತೆಗುಂಡಿಗಳನ್ನು ಮುಚ್ಚಲು ಕ್ರಮಕೈಗೊಳ್ಳಲಾಗುವುದು ಎಂದು ವಾರ್ಡಿನ ಸಹಾಯಕ ಇಂಜಿನಿಯರ್ ರವರು ತಿಳಿಸಿದರು.<br>ಮಾನ್ಯ ಶಾಸಕರು ಮಾತನಾಡಿ ಕೂಡಲೇ ರಸ್ತೆ ಗುಂಡಿಗಳ ಸಮಸ್ಯೆಯನ್ನು ಬಗೆಹರಿಸುವಂತೆ ಸೂಚಿಸಿದರು ಮತ್ತು ರಸ್ತೆಗುಂಡಿ ಮುಚ್ಚುವ ಕಾಮಗಾರಿಯ ಮೇಲ್ವಿಚಾರಣೆಯನ್ನು ನೋಡಿಕೊಳ್ಳುವಂತೆ ಕಾರ್ಯಪಾಲಕ ಅಭಿಯಂತರರಿಗೆ ಸೂಚಿಸಿದರು. |
| 5 | ವಾರ್ಡ್ ಸಮಿತಿ ಸದಸ್ಯರಾದ ಶ್ರೀ ಪ್ರಭಾಕರ್ ರವರು ಮಾತನಾಡಿ ವಾರ್ಡಿನಲ್ಲಿ ಎಲ್ಲಾ ಕಡೆ ಮರಗಳ ಟ್ರಿಮ್ಮಿಂಗ್ ಮಾಡಿ ಬಹಳ ದಿನಗಳು ಕಳೆದಿರುವುದರಿಂದ ಮರಗಳ ರೆಂಬೆಗಳು ಬೆಳೆದುಕೊಂಡು ಬೀದಿ ದೀಪಗಳ ಬೆಳಕು ರಸ್ತೆಯ ಮೇಲೆ ಬೀಳದಂತಾಗಿರುತ್ತದೆ ಎಂದು ತಿಳಿಸಿ ಕೂಡಲೇ ಮರಗಳ ಟ್ರಿಮ್ಮಿಂಗ್ ಮಾಡುವಂತೆ ಕೋರಿದರು. | ಮಾನ್ಯ ಶಾಸಕರು ಪಾಲಿಕೆಯ ಅರಣ್ಯ ಇಲಾಖೆ ಸಿಬ್ಬಂದಿಯಾದ ಶ್ರೀ ದೇವರಾಜ್ ರವರಿಗೆ ಕೂಡಲೇ ಬೀದಿ ದೀಪಗಳ ಸುತ್ತಲು ಬೆಳೆದಿರುವ ಮರಗಳ ಕೊಂಬೆಗಳನ್ನು ಟ್ರಿಮ್ಮಿಂಗ್ ಮಾಡಲು ಸೂಚಿಸಿದರು. ಮತ್ತು ಕಾಲಾನುಕಾಲಕ್ಕೆ ವಾರ್ಡಿನಲ್ಲಿ ಮರಗಳ ಟ್ರಿಮ್ಮಿಂಗ್ ಕಾರ್ಯವನ್ನು ನಿರ್ವಹಿಸುವಂತೆ ಸೂಚಿಸಿದರು. |
| 6 | ವಾರ್ಡಿನಲ್ಲಿ ಹಾದುಹೋಗಿರುವ ಬೃಹತ್ ನೀರುಗಾಲುವೆಯ ತಡೆಗೋಡೆ ನಿರ್ಮಾಣ ಮತ್ತು ಸದರಿ ನೀರುಗಾಲುವೆಯಿಂದ ಹೂಳನ್ನು ತೆಗೆದು ರಸ್ತೆಯಲ್ಲಿ ಹಾಕಿರುವ ಬಗ್ಗೆ ಮಾನ್ಯ ಶಾಸಕರು ಸಭೆಯಲ್ಲಿ ಚರ್ಚಿಸಿದರು. | ಈ ಬಗ್ಗೆ ಮಾತನಾಡಿದ ಬೃಹತ್ ನೀರುಗಾಲುವೆ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು ಕೂಡಲೇ ತಡೆಗೋಡೆ ನಿರ್ಮಿಸುವ ಕಾಮಗಾರಿಯನ್ನು ಕೈಗೆತ್ತಿಕೊಳ್ಳುವುದಾಗಿ ತಿಳಿಸಿದರು ಮತ್ತು ಚಾನಲ್ ರಸ್ತೆಯಲ್ಲಿ ಹಾಕಲಾಗಿರುವ ಹೂಳನ್ನು ತೆರವುಗೊಳಿಸುವುದಾಗಿ ಸಭೆಗೆ ಮಾಹಿತಿ ನೀಡಿದರು. |
| 7 | ವಾರ್ಡ್ ಸಮಿತಿ ಸದಸ್ಯರಾದ ಮುಸ್ತಫಾ ರವರು ಮಾತನಾಡಿ ವಾರ್ಡಿನಲ್ಲಿರುವ ಮುಖ್ಯರಸ್ತೆಗಳ ಅಭಿವೃದ್ಧಿಗಾಗಿ ಪಾಲಿಕೆಯಿಂದ ಮೀಸಲಿಟ್ಟ ಅನುದಾನದ ವಿವರಗಳನ್ನು ಕೋರಿದರು. | ಈ ಸಂಬಂಧ ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗದ (Major Roads) ಅಧಿಕಾರಿಗಳು ಸಭೆಗೆ ಹಾಜರಾಗದ ಕಾರಣ, ಸದರಿಯವರಿಗೆ ಪತ್ರ ಬರೆದು ಎಲ್ಲಾ ಕಾಮಗಾರಿಗಳ ವಿವರಗಳನ್ನು ಮತ್ತು ರಸ್ತೆಗಳ |

| | | |
|---|---|---|
| | | ಅಭಿವೃದ್ಧಿಗಾಗಿ ಮೀಸಲಿಟ್ಟಿರುವ ಅನುದಾನದ ಬಗ್ಗೆ ಸಂಪೂರ್ಣ ಮಾಹಿತಿಯನ್ನು ಕ್ರೋಢೀಕರಿಸಿಕೊಂಡು ಮುಂದಿನ ಸಭೆಗೆ ಹಾಜರಾಗುವಂತೆ ತಿಳಿಸಲು ಮಾನ್ಯ ಶಾಸಕರು ಸಮಿತಿ ಕಾರ್ಯದರ್ಶಿಗಳಿಗೆ ಆದೇಶಿಸಿದರು. |
| 8 | ವಾರ್ಡ್ ಸಮಿತಿ ಸದಸ್ಯರಾದ ಶ್ರೀಮತಿ. ಶಿವಗಾಮಿ ರವರು ವಾರ್ಡಿನ ವಿವೇಕನಗರ ಫರ್ದರ್ ಬಡಾವಣೆಯ 8ನೇ ಅಡ್ಡರಸ್ತೆಯ ಕಾಂಕ್ರೀಟ್ ಕಾಮಗಾರಿಯನ್ನು ಕೂಡಲೇ ಪೂರ್ಣಗೊಳಿಸಲು ಕೋರಿದರು. | ಮಾನ್ಯ ಶಾಸಕರು ಈ ಬಗ್ಗೆ ಮಾತನಾಡಿ ವಾರ್ಡಿನ ಸಹಾಯಕ ಅಭಿಯಂತರರಿಂದ ಮಾಹಿತಿಯನ್ನು ಪಡೆದು ಸ್ಥಳ ಪರಿಶೀಲನೆ ಮಾಡಿ ಕಾಮಗಾರಿಯನ್ನು ಆದಷ್ಟು ಬೇಗ ಪೂರ್ಣಗೊಳಿಸಲು ಕ್ರಮಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು. |

ಸಮಿತಿಯ ಕಾರ್ಯದರ್ಶಿಯವರು ಸಭೆಗೆ ಹಾಜರಾಗಿದ್ದ ಮಾನ್ಯ ಶಾಸಕರಿಗೆ ಮತ್ತು ಸಮಿತಿಯ ಸದಸ್ಯರುಗಳಿಗೆ ಹಾಗೂ ಸಾರ್ವಜನಿಕರಿಗೆ ವಂದಿಸಿ ಮೇರೆಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ ಮತ್ತು ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 115 ವನ್ನಾರಪೇಟೆ
ಬಿ.ಬಿ.ಎಂ.ಪಿ

ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 115 ವನ್ನಾರಪೇಟೆ
ಬಿ.ಬಿ.ಎಂ.ಪಿ

ಪ್ರತಿಯನ್ನು:

1. ಮಾನ್ಯ ಆಡಳಿತಗಾರರು, ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
3. ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ಸಲ್ಲಿಸಿದೆ.
4. ಜಂಟಿ ಆಯುಕ್ತರು (ಪೂರ್ವ) ರವರ ಅವಗಾಹನೆಗೆ ಸಲ್ಲಿಸಿದೆ.
5. ಮಾನ್ಯ ಮುಖ್ಯ ಅಭಿಯಂತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
6. ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
7. **ಸದರಿ ಸಭೆಯ ನಡಾವಳಿ ಪ್ರತಿಯನ್ನು ಸಭೆಗೆ ಹಾಜರಾಗಿದ್ದ ಎಲ್ಲಾ ಇಲಾಖೆಯ ಅಧಿಕಾರಿಗಳಿಗೆ ಕಳುಹಿಸಿಕೊಡುತ್ತಾ. ಸಭೆಯಲ್ಲಿ ಸಾರ್ವಜನಿಕರು ಮತ್ತು ವಾರ್ಡ್ ಸಮಿತಿ ಸದಸ್ಯರುಗಳು ಚರ್ಚಿಸಿದ ವಿಷಯದ ಬಗ್ಗೆ ಹಾಗೂ ಸಮಸ್ಯೆಗಳನ್ನು ಬಗೆಹರಿಸಲು ಕೈಗೊಂಡ ಕ್ರಮಗಳ ಸಂಪೂರ್ಣ ವಿವರವನ್ನು ಲಿಖಿತ ರೂಪದಲ್ಲಿ ಸದಸ್ಯ ಕಾರ್ಯದರ್ಶಿ ಮತ್ತು ಸಹಾಯಕ ಅಭಿಯಂತರರ ಕಚೇರಿಗೆ ಸಲ್ಲಿಸಲು ಈ ಮೂಲಕ ಎಲ್ಲಾ ಇಲಾಖೆಯ ಅಧಿಕಾರಿಗಳಲ್ಲಿ ಕೋರಿದೆ.**
8. ಕಚೇರಿ ಪ್ರತಿ.